2022-23

# ಕರ್ನಾಟಕ ಸರ್ಕಾರದ ನಡಾವಳಿಗಳು

2899
30/9/22

ವಿಷಯ : ಬೆಂಗಳೂರಿನ ನಾಗರಬಾವಿಯಲ್ಲಿರುವ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ನೂತನ ಕಚೇರಿ ಕಟ್ಟಡದ ಆವರಣದಲ್ಲಿ ಪ್ರಾತ್ಯಕ್ಷಿಕವಾಗಿ 250 ಕೆ.ವಿ ಸಾಮರ್ಥ್ಯದ 2 ಪವನ ವಿದ್ಯುತ್ ಸ್ಥಾವರಗಳನ್ನು ಸ್ಥಾಪಿಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ :**

1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ: KREDL/08/KREDL - 0.5 MW/Corporate Office Nagarbhavi/F - 56 (2022)/1871, ದಿನಾಂಕ:05.09.2022
2) ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2022-27

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ.(1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು ರಾಜ್ಯದಲ್ಲಿ ಪವನ/ಕಿರುಜಲ/ಸೌರ ವಿದ್ಯುತ್/ಜೈವಿಕ ಇಂಧನ/ಸಹ ವಿದ್ಯುತ್ ಮುಂತಾದ ನವೀಕರಿಸಬಹುದಾದ ಇಂಧನ ಮೂಲಗಳಿಂದ ವಿದ್ಯುತ್ ಉತ್ಪಾದಿಸಲು ಖಾಸಗಿ ಸಂಸ್ಥೆಗಳಿಗೆ ಅನುಮೋದನೆ ನೀಡಿ ಉತ್ತೇಜಿಸುವ ಕಾರ್ಯವನ್ನು ಮಾಡುತ್ತಿದೆ.

ನವ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳ ಮಂತ್ರಾಲಯವು 13 ನೇ ಹಣಕಾಸಿನ ಆಯೋಗದ ಅಡಿಯಲ್ಲಿ ರೂ.50.00 ಕೋಟಿ ಮೊತ್ತದ ಅನುದಾನವನ್ನು ಕೆಆರ್‌ಇಡಿಎಲ್ ಸಂಸ್ಥೆಗೆ ಹಂಚಿಕೆ ಮಾಡಲಾಗಿತ್ತು. ಅದರಂತೆ, KPTCL ಇಂದ ಕೆ.ಆರ್.ಇ.ಡಿ.ಎಲ್.ಗೆ 2.25 ಎಕರೆ ಭೂಮಿಯನ್ನು 28 ವರ್ಷಗಳ ಅವಧಿಗೆ ಗುತ್ತಿಗೆ ಪಡೆದು ನಾಗರಭಾವಿಯಲ್ಲಿ ಕಟ್ಟಡವನ್ನು ಉತ್ತಮ ಇಂಧನ ಸಂರಕ್ಷಣೆ ಸಂಕೇತಗಳ ಅನುಸರಣೆ ಮಾಡಿ ನಿರ್ಮಿಸಲಾಗಿದೆ. ಸಾಂಪ್ರದಾಯಕ ಕಟ್ಟಡಗಳಿಗೆ ತುಲನೆ ಮಾಡಿದರೆ ಶೇ.33 ರಷ್ಟು ಇಂಧನ ಉಳಿತಾಯವನ್ನು ನಿರೀಕ್ಷಿಸಬಹುದು. ಕಟ್ಟಡದ ಒಟ್ಟು ನಿರ್ಮಾಣದ ವಿಸ್ತೀರ್ಣ 1,50,000 ಚದರ ಅಡಿ ಇರುತ್ತದೆ. ಸದರಿ ಕಟ್ಟಡದಲ್ಲಿ Skill Development, Internship ಮತ್ತು Incubation ಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಈ ಬಗ್ಗೆ ಈಗಾಗಲೇ ಕೆ.ಆರ್.ಇ.ಡಿ.ಎಲ್.ನ ನಿರ್ದೇಶಕರ ಮಂಡಳಿಯ ಸಭೆಯಲ್ಲಿ ಅನುಮೋದಿಸಿದ್ದು, ಸದರಿ ಕಾರ್ಯಕ್ರಮವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಕೆ.ಆರ್.ಇ.ಡಿ.ಎಲ್. ನಿಯಮಿತದ ನೂತನ ಕಚೇರಿ ಕಟ್ಟಡದ ಆವರಣದಲ್ಲಿ ಪ್ರಾತ್ಯಕ್ಷಿಕವಾಗಿ 250 kW ಸಾಮರ್ಥ್ಯದ 2 ಪವನ ವಿದ್ಯುತ್ ಸ್ಥಾವರಗಳನ್ನು ಸ್ಥಾಪಿಸಲು ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತ ಬಳಕೆಗೆ ಉಪಯೋಗಿಸಲು ಉದ್ದೇಶಿಸಲಾಗಿದೆ. ಸದರಿ ವಿಂಡ್ ಮಿಲ್ ಟರ್ಬೈನ್‌ಗಳನ್ನು ಸ್ಥಾಪಿಸುವುದರಿಂದ Skill Development ಮತ್ತು Internship ತರಬೇತಿಗೆ ಬರುವ ವಿದ್ಯಾರ್ಥಿಗಳಿಗೆ Wind Farm ಸ್ಥಳಗಳಿಗೆ ಭೇಟಿ ನೀಡುವ ಬದಲಾಗಿ ಕೆ.ಆರ್.ಇ.ಡಿ.ಎಲ್. ಕಚೇರಿಯಲ್ಲಿಯೇ Working Model ಮಾಡುವುದರಿಂದ ಸಮಯವು ಉಳಿಯುತ್ತದೆ ಮತ್ತು ಹೆಚ್ಚಿನ ಮಾಹಿತಿಯು ದೊರೆಯುತ್ತದೆ ಎಂದು ತಿಳಿಸುತ್ತಾರೆ. ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತ ಬಳಕೆಗೆ ಉಪಯೋಗಿಸಲು ಅನುಮತಿ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(2)ರ ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2022-27 ರ ಕಂಡಿಕೆ-5(F)ರಲ್ಲಿ ಈ ಕೆಳಕಂಡಂತೆ ಉಲ್ಲೇಖಿಸಲಾಗಿದೆ.

1. The Government of Karnataka will promote RE projects/parks as per the schemes of the State Government / Central Government issued from time to time.
2. Any applicable Government schemes (State and Central) can be explored by the RE project / park developer for the purpose of project development under this Policy.

Wind Section
Inward No. 1120
Date 1/10/22

ATO 1/10/22

3. The Government of India incentives under MNRE RE schemes (or any others), such as Central Financial Assistance, concessional custom duty on specified items and others as applicable shall be extended to the project developer under this Policy.
4. The State shall continue to support implementation of RE programs and schemes of the MNRE.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಕೆ.ಆರ್.ಇ.ಡಿ.ಎಲ್. ನಿಯಮಿತದ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ:ಎನರ್ಜಿ 381 ಎನ್‌ಸಿಇ 2022</u>**
**<u>ಬೆಂಗಳೂರು, ದಿನಾಂಕ: 29-09-2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಬೆಂಗಳೂರಿನ ನಾಗರಭಾವಿಯಲ್ಲಿರುವ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ನೂತನ ಕಚೇರಿ ಕಟ್ಟಡದ ಆವರಣದಲ್ಲಿ ಪ್ರಾತ್ಯಕ್ಷಿಕವಾಗಿ 250 kW ಸಾಮರ್ಥ್ಯದ 2 ಪವನ ವಿದ್ಯುತ್ ಸ್ಥಾವರಗಳನ್ನು ಸ್ಥಾಪಿಸಲು ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತ ಬಳಕೆಗೆ (Captive use) ಉಪಯೋಗಿಸಿಕೊಳ್ಳಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದಿಂದ ಅನುಮೋದನೆ ನೀಡಿದೆ.

**<u>ಷರತ್ತುಗಳು:</u>**

1) ಮೇಲ್ಕಂಡ ಯೋಜನೆಗೆ ಅಗತ್ಯವಿರುವ ಅನುದಾನವನ್ನು 13ನೇ ಹಣಕಾಸು ಆಯೋಗದಿಂದ ಕೆ.ಆರ್.ಇ.ಡಿ.ಎಲ್.ಗೆ ಹಂಚಿಕೆ ಮಾಡಿರುವ ರೂ.50.00 ಕೋಟಿ ಅನುದಾನದಲ್ಲಿ ಆಯೋಗದ ನಿಯಮಾನುಸಾರ ಭರಿಸತಕ್ಕದ್ದು.
2) ಕೆ.ಆರ್.ಇ.ಡಿ.ಎಲ್. ಕಛೇರಿಯ ಕಟ್ಟಡಕ್ಕೆ BESCOM ಇಂದ 615 kVA Contract Demand ವಿದ್ಯುತ್ ಮಂಜೂರಾತಿ ಪಡೆದುಕೊಂಡು, ಆವರಣದಲ್ಲಿ Micro Grid ಸ್ಥಾಪಿಸಲು ಕ್ರಮ ಕೈಗೊಳ್ಳುವುದು.
3) ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕೆ.ಪಿ.ಟಿ.ಸಿ.ಎಲ್. ಇಂದ Evacuate Approval, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಗಳಿಂದ ನಿರಾಕ್ಷೇಪಣಾ ಪತ್ರವನ್ನು ಪಡೆದುಕೊಳ್ಳತಕ್ಕದ್ದು.
4) ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತ ಬಳಕೆಗೆ ಉಪಯೋಗಿಸಿಕೊಳ್ಳತಕ್ಕದ್ದು.
5) ಉಳಿದಂತೆ ಯೋಜನೆಯನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2022-27 ರನ್ವಯ ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

DM

(ವಿನೋದ್ ಕುಮಾರ್.ಡಿ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
23/9/22

**<u>ಇವರಿಗೆ :</u>**

1) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.

2) ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ, ಬೆಂಗಳೂರು
3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು.
7) ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ಬೆಂಗಳೂರು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ